# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ -144ರ ವಾರ್ಡ್ ಸಭೆಯ ನಡವಳಿ

(176)

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಸ ವಾರ್ಡ್ ಸಂಖ್ಯೆ: 176-ಸೋಮೇಶ್ವರನಗರ (ಹಳೆ ವಾರ್ಡ್-144) ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀ. ಪ್ರದೀಪ್‌ಕುಮಾರ್ ಎನ್., ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಕೆಂಪೇಗೌಡನಗರ ಉಪವಿಭಾಗ ಹಾಗೂ ನೋಡಲ್ ಅಧಿಕಾರಿ ಮತ್ತು ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:15/10/2022 ರಂದು ಶನಿವಾರದಂದು ಬೆಳಗ್ಗೆ 10.30 ರಿಂದ 12.00 ರವರೆಗೆ ವಾರ್ಡ್ ಕಮಿಟಿ ಸಭೆಯನ್ನು ಸೋಮೇಶ್ವರನಗರ ಮುಖ್ಯ ರಸ್ತೆ, ಗಣೇಶ ದೇವಸ್ಥಾನದ ಹತ್ತಿರ ಇರುವ ಪಾಲಿಕೆಯ ಕಟ್ಟಡದಲ್ಲಿ ನಡೆಸಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಅಧಿಕಾರಿಗಳಿಗೆ ಹಾಗೂ ಸಾರ್ವಜನಿಕರಿಗೆ ಆಹ್ವಾನ ನೀಡಿದ್ದು, ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:-**

1. ಶ್ರೀ. ಪ್ರದೀಪ್‌ಕುಮಾರ್ ಎನ್, ಸ.ಕಾ.ನಿ.ಅ (ಕೆ.ಗೌ.ನ) ಹಾಗೂ ನೋಡಲ್ ಅಧಿಕಾರಿ.
2. ಶ್ರೀ. ಆರ್. ಕೊಟ್ರೇಶ್ ನಾಯಕ್, ಸಹಾಯಕ ಅಭಿಯಂತರರು, ವಾರ್ಡ್-176(144).
3. ಶ್ರೀ. ಶೌಖತ್ ಅಲಿ, ಕಿರಿಯ ಅಭಿಯಂತರರು, ಬೆಸ್ಕಾಂ.
4. ಶ್ರೀ. ಎಂ.ಎಂ. ಬಾಬು, ಕಂದಾಯ ಪರಿವೀಕ್ಷಕರು.
5. ಶ್ರೀ. ಮಂಜುನಾಥ್, ಕಂದಾಯ ವಸೂಲಿಗಾರರು.
6. ಶ್ರೀ. ಗೋಪಿನಾಥ್, ಕೆಲಸ ಪರಿವೀಕ್ಷಕರು ಬೆಂ.ನೀ.ಸ ಮತ್ತು ಒಳಚರಂಡಿ ಮಂಡಳಿ.
7. ಹಾಗೂ ಸಾರ್ವಜನಿಕರಾದ ಶ್ರೀ. ಕಬೀರ್ ಕಮಲ್, ಶ್ರೀ. ಭೀಮಪ್ಪ ಎಂ., ಶ್ರೀ. ಸಮೀಉಲ್ಲಾ, ಶ್ರೀ. ಜಯಕೃಷ್ಣ, ಶ್ರೀ. ಫಜಲ್‌ಖಾನ್, ಶ್ರೀ. ಅನೀಸ್ ಅಹಮದ್, ಶ್ರೀ. ಮೊಹಮ್ಮದ್ ಸಲಾವುದ್ದೀನ್, ಶ್ರೀ. ಸುರೇಶ್ ಹೆಚ್.ಕೆ.

*********

1. ನೋಡಲ್ ಅಧಿಕಾರಿಯವರು ಮಾತನಾಡಿ ಕಳೆದ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಕೈಗೊಂಡ ಕ್ರಮಗಳ ಕುರಿತು ಕಳೆದ ಸಭೆಯ ನಡವಳಿಗಳನ್ನು ಓದುವಂತೆ ವಾರ್ಡ್ ಅಭಿಯಂತರರಿಗೆ ತಿಳಿಸಿದರು. ಅದರಂತೆ ವಾರ್ಡ್ ಅಭಿಯಂತರರು ಕಳೆದ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಕುರಿತು ಸಭೆಯಲ್ಲಿ ಪ್ರಸ್ತಾಪಿಸಿ ದೂರುಗಳಿಗೆ ಸಂಬಂಧಿಸಿದಂತೆ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಿವರಿಸಿದರು. ಅದರಂತೆ ಕಳೆದ ಸಭೆಯ ನಡವಳಿಗಳ ದೂರುಗಳನ್ನು ಪರಿಹರಿಸಲಾಗಿರುತ್ತದೆ.



Scanned with CamScanner

2. ಸಭೆಯಲ್ಲಿ ಹಾಜರಿದ್ದ ವಾರ್ಡಿನ ಸ್ಥಳೀಯರು ಮಾತನಾಡಿ ಹೊಸ ವಾರ್ಡ್ ಪ್ರದೇಶಗಳ ವಿಂಗಡಣೆಯಂತೆ ವಾರ್ಡ್ ಸಭೆಗಳನ್ನು ನಡೆಸಲು ಮಾನ್ಯ ಘನ ನ್ಯಾಯಾಲಯ ನಿರ್ದೇಶಿಸಿದ್ದು, ಅದರಂತೆ ನಮ್ಮ ಸಮಸ್ಯೆಗಳನ್ನು ಹಳೆಯ ವಾರ್ಡಿನಲ್ಲಿ ಅಥವಾ ಹೊಸ ವಾರ್ಡಿನಲ್ಲಿ ಪರಿಹರಿಸಿಕೊಡುವಿರೆಂದು ಸ್ಥಳೀಯರು ಸದರಿ ಸಭೆಯಲ್ಲಿ ಕೋರಿದ ಹಿನ್ನೆಲೆಯಲ್ಲಿ ಅಧ್ಯಕ್ಷರು ಮಾತನಾಡಿ. ಎರಡೂ ವಾರ್ಡ್‌ಗಳಲ್ಲಿಯೂ ಸಹ ಸದರಿ ವಾರ್ಡಿಗೆ ಸಂಬಂಧಪಟ್ಟ ದೂರುಗಳನ್ನು ನೀಡಿದ್ದಲ್ಲಿ ಆಯಾ ವಾರ್ಡ್‌ಗಳ ಅಭಿಯಂತರರು ಪರಿಹರಿಸಿಕೊಡುವರೆಂದು ಸಭೆಯಲ್ಲಿ ತಿಳಿಸಿದರು.

3. ವಾರ್ಡಿನ ಸ್ಥಳೀಯರಾದ ಶ್ರೀ. ಅನೀಸ್ ಅಹಮದ್ ರವರು ಮಾತನಾಡಿ ಈಗಾಗಲೇ ಸಾಕಷ್ಟು ಬಾರಿ ಹಳೆಯ ವಾರ್ಡ್ ಸಂಖ್ಯೆ: 153ರಲ್ಲಿ ನಡೆದ ಸಭೆಗಳಲ್ಲಿ ಸಾಕಷ್ಟುಬಾರಿ ದೂರು ಸಲ್ಲಿಸಿದ್ದರೂ ಸಹ ಇಲ್ಲಿಯವರೆಗೆ ಎಷ್ಟು ದೂರುಗಳಿಗೆ ಸಂಬಂಧಪಟ್ಟ ಇಲಾಖೆಗಳಿಂದ ಪರಿಹಾರ ಒದಗಿಸಲಾಗಿದೆ ಎಂಬುದರ ಬಗ್ಗೆ ವಿವರವನ್ನು ಕೋರುತ್ತಾ, ಹಾಗೂ ಹಳೆಯ ವಾರ್ಡ್‌ನಲ್ಲಿ ನಡೆಯುತ್ತಿರುವ ಕಾಮಗಾರಿಗಳ ಬಗ್ಗೆ ಅಸಮಧಾನ ವ್ಯಕ್ತಪಡಿಸುತ್ತಾ, ಕೂಡಲೇ ಸಮಸ್ಯೆಗಳನ್ನು ಬಗೆಹರಿಸಿಕೊಡಲು ಕೋರಿದರು. ಅದರಂತೆ ಅಧ್ಯಕ್ಷರು ಮಾತನಾಡಿ ಸಂಬಂಧಪಟ್ಟ ಇಲಾಖೆಗಳಿಗೆ ಈ ಬಗ್ಗೆ ಕ್ರಮ ವಹಿಸಲು ತಿಳಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

4. ವಾರ್ಡಿನ ಸ್ಥಳೀಯರಾದ ಶ್ರೀ. ಕಬೀರ್ ಕಮಲ್ ರವರು ಮಾತನಾಡಿ ಎಸ್.ಆರ್.ಕೆ ಗಾರ್ಡನ್‌ನಲ್ಲಿ ಬಿ.ಹೆಚ್.ಇ.ಎಲ್ ರಸ್ತೆಯಲ್ಲಿ BWSSB ಮತ್ತು OFC ಕೇಬಲ್ ನವರು ಅಳವಡಿಸಿರುವ ಛೇಂಬರ್‌ಗಳು ರಸ್ತೆಯಿಂದ ಮೇಲಕ್ಕಿದ್ದು, ವಾಹನ ಮತ್ತು ಸಾರ್ವಜನಿಕರು ಓಡಾಡಲು ತುಂಬಾ ತೊಂದರೆಯಾಗಿದೆ ಎಂದು ಸಭೆಯಲ್ಲಿ ಮತ್ತೊಮ್ಮೆ ತಿಳಿಸಿದರು. ಹಾಗೂ ಸದರಿ ಪ್ರದೇಶದಲ್ಲಿ ಮಳೆಗಾಲದಲ್ಲಿ ಸರಾಗವಾಗಿ ನೀರು ಹರಿಯದೇ ತೊಂದರೆಯಾಗುತ್ತಿದೆ ಎಂದು ದೂರಿದರು. ಈ ಸಂಬಂಧ ನೋಡಲ್ ಅಧಿಕಾರಿಯವರು ಮಾತನಾಡಿ ಹಳೆಯ ವಾರ್ಡ್ 153 ಅಭಿಯಂತರರು ರವರಿಗೆ ಕ್ರಮ ವಹಿಸಲು ತಿಳಿಸಲಾಗುವುದೆಂದು ಸಭೆಯಲ್ಲಿ ಉತ್ತರಿಸಿದರು.

5. ವಾರ್ಡಿನ ಸ್ಥಳೀಯರಾದ ಶ್ರೀ. ಸಲಾವುದ್ದೀನ್ ರವರು ಮಾತನಾಡಿ ಬಿ.ಹೆಚ್.ಇ.ಎಲ್ ಲೇಔಟ್‌ನಲ್ಲಿರುವ ಉದ್ಯಾನವನದಲ್ಲಿ ಬೀದಿ ದೀಪಗಳು ಕೆಲಸ ನಿರ್ವಹಿಸದೇ ಸಾರ್ವಜನಿರಕಗೆ ಓಡಾಡಲು ತೊಂದರೆಯಾಗಿರುವುದಾಗಿ ತಿಳಿಸಿದರು. ಈ ಸಂಬಂಧ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಹಳೆಯ ವಾರ್ಡ್ 153 ಅಭಿಯಂತರರು ರವರಿಗೆ ಕ್ರಮ ವಹಿಸಲು ತಿಳಿಸಲಾಗುವುದೆಂದು ಸಭೆಯಲ್ಲಿ ಹೇಳಿದರು.



Scanned with CamScanner

6. ವಾರ್ಡಿನ ಸ್ಥಳೀಯರಾದ ಶ್ರೀ. ಸಲಾವುದ್ದೀನ್ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ನಾಯಿಗಳ ಹಾವಳಿ ಹೆಚ್ಚಾಗಿದ್ದು, ತೊಂದರೆಯಾಗಿರುವುದಾಗಿ ತಿಳಿಸಿದರು. ಈ ಸಂಬಂಧ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಪಶು ಸಂಗೋಪನಾ ಇಲಾಖೆ ರವರಿಗೆ ಕ್ರಮ ವಹಿಸಲು ತಿಳಿಸಲಾಗುವುದೆಂದು ಸಭೆಯಲ್ಲಿ ಹೇಳಿದರು.

7. ವಾರ್ಡಿನ ಸ್ಥಳೀಯರಾದ ಶ್ರೀ. ಭೀಮಪ್ಪ ರವರು ಮಾತನಾಡಿ ಗಲ್ಬರ್ಗ ಕಾಲೋನಿಯಲ್ಲಿ ಚರಂಡಿಯಲ್ಲಿ ಹೂಳು ತೆಗೆಯುವ ಕಾಮಗಾರಿಯು ಪೂರ್ಣಗೊಳ್ಳದೇ ಮಳೆ ನೀರು ಸರಾಗವಾಗಿ ಹರಿಯದೇ ರಸ್ತೆಯ ಮೇಲೆ ಹರಿದು ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು. ಮಾತನಾಡಿ ಸಂಬಂಧಪಟ್ಟ ಹಳೆಯ ವಾರ್ಡ್ 153 ಅಭಿಯಂತರರು ರವರಿಗೆ ಕ್ರಮ ವಹಿಸಲು ತಿಳಿಸಲಾಗುವುದೆಂದು ಸಭೆಯಲ್ಲಿ ಹೇಳಿದರು.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

AE 15/10/22

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 176(144)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

15/10/22

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 176(144)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Scanned with CamScanner